# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2017-18ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2405-00-101-0-66- ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತದಲ್ಲಿ ಮತ್ಸ್ಯಾಶ್ರಯ ಯೋಜನೆಗಾಗಿ ಕಾಯ್ದಿರಿಸಲಾದ ಮೊತ್ತ ರೂ.570.00 ಲಕ್ಷಗಳನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- (1) ಆದೇಶ ಸಂಖ್ಯೆ: ಪಸಂಮೀ/58/ಮೀಇಯೋ/2017, ದಿನಾಂಕ: 06-09-2017.

(2) ಆದೇಶ ಸಂಖ್ಯೆ: ಪಸಂಮೀ/69/ಮೀಇಯೋ/2017, ದಿನಾಂಕ: 04-08-2017 ಮತ್ತು 13-12-2017.

(3) ಪತ್ರ ಸಂಖ್ಯೆ: ಪತ್ರ ಸಂಖ್ಯೆ: ಮೀನಿ/01/ಪಂವಾಯೋ(1)/2017, ದಿನಾಂಕ: 17-01-2018.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ, 2017-18ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ವಿಶೇಷ ಘಟಕ ಉಪ ಯೋಜನೆಯನ್ನು ರೂ.12.53 ಕೋಟಿಗಳ ವೆಚ್ಚದಲ್ಲಿ ಮತ್ತು ಗಿರಿಜನ ಉಪ ಯೋಜನೆಯನ್ನು ರೂ.7.91 ಕೋಟಿಗಳ ವೆಚ್ಚದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ, 2017-18 ನೇ ಸಾಲಿನ ಮತ್ಸ್ಯಾಶ್ರಯ-11 ರ ಯೋಜನೆಯಡಿ ಆಯವ್ಯಯ ಭಾಷಣದಲ್ಲಿ ಘೋಷಿಸಲಾದ 3000 ಮನೆಗಳನ್ನು ರೂ.4016.20 ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ದಿನಾಂಕ: 06-09-2017 ರಂತೆ ಲೆಕ್ಕ ಶೀರ್ಷಿಕೆ 2405-00-101-0-66 ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ ಯೋಜನೆಯಡಿ ರೂ.1449.00 ಲಕ್ಷಗಳ (422- ರೂ.1051.00 ಲಕ್ಷ + 423-ರೂ.398.00 ಲಕ್ಷ) ಅನುದಾನಕ್ಕೆ ವಿವಿಧ ಘಟಕಗಳನ್ನು ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ರೂ.450.00 ಲಕ್ಷಗಳನ್ನು 254 ಮನೆಗಳ ನಿರ್ಮಾಣಕ್ಕೆ ಉಪ ಶೀರ್ಷಿಕೆ 422 ರಡಿ ಹಾಗೂ ರೂ.120.00 ಲಕ್ಷಗಳು 67 ಮನೆಗಳ ನಿರ್ಮಾಣಕ್ಕೆ 423 ರಡಿ ಕಾಯ್ದಿರಿಸಲಾಗಿದೆ. ಆಯವ್ಯಯ ಭಾಷಣದಲ್ಲಿ ಘೋಷಿಸಲಾದ 3000 ಮನೆಗಳ ಪೈಕಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಕ್ಕೆ ಕ್ರಮವಾಗಿ ರೂ.914.00 ಲಕ್ಷ ಹಾಗೂ ರೂ.371.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದೆ.

-2-

ಮುಂದುವರೆದು, ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಮತ್ಸ್ಯಾಶ್ರಯ ಮನೆಗಳ ನಿರ್ಮಾಣಕ್ಕಾಗಿ ಅಗತ್ಯವಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ 2405-00-101-01-66-422/423 ರಡಿ ಮನೆಗಳ ನಿರ್ಮಾಣಕ್ಕಾಗಿ ಕಾಯ್ದಿರಿಸಿರುವ ಅನುದಾನ ರೂ.570.00 ಲಕ್ಷಗಳಿಂದ ಭರಿಸಲು ಪ್ರಸ್ತಾಪಿಸುತ್ತಾ (ವಿಶೇಷ ಘಟಕ ಉಪಯೋಜನೆ ರೂ.450.00 ಲಕ್ಷ + ಗಿರಿಜನ ಉಪಯೋಜನೆ ರೂ.120.00 ಲಕ್ಷ), ಅದರಂತೆ ಮನೆಗಳ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಗೊಳಿಸಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ: ಪಸಂಮೀ 58 ಮೀಇಯೋ 2017, ಬೆಂಗಳೂರು ದಿನಾಂಕ: 05-03-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಲೆಕ್ಕ ಶೀರ್ಷಿಕೆ 2405-00-101-01-66-422/423 ರಡಿ ಮನೆಗಳ ನಿರ್ಮಾಣಕ್ಕಾಗಿ ಕಾಯ್ದಿರಿಸಿರುವ ಅನುದಾನ ರೂ.570.00 ಲಕ್ಷ (ಐನೂರು ಲಕ್ಷದ ಎಪ್ಪತ್ತು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ವಿಶೇಷ ಘಟಕ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಅಗತ್ಯವಿರುವ ಮತ್ಸ್ಯಾಶ್ರಯ ಮನೆಗಳ ನಿರ್ಮಾಣಕ್ಕಾಗಿ ಬಿಡುಗಡೆಗೊಳಿಸಲಾಗಿದೆ.

ಸದರಿ ವೆಚ್ಚವನ್ನು 2017-18 ನೇ ಸಾಲಿನ ಲೆಕ್ಕ ಶೀರ್ಷಿಕೆ 2405-ಮೀನುಗಾರಿಕೆ 00-101-ಒಳನಾಡು ಮೀನುಗಾರಿಕೆ -0-66-ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ -422/423 ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಸದರಿ ಮೊತ್ತವನ್ನು ಯೋಜನೆಯ ಅನುಷ್ಠಾನಕ್ಕಾಗಿ ನೇಮಿಸಿರುವ ನೋಡಲ್ ಸಂಸ್ಥೆಯಾದ ರಾಜೀವ್ ಗಾಂಧಿ ವಸತಿ ನಿಗಮ, ಬೆಂಗಳೂರು ರವರು ಸಲ್ಲಿಸುವ ಪೇಯಿಸ್ ರಸೀದಿಗೆ ಮೀನುಗಾರಿಕೆ ನಿರ್ದೇಶಕರುರವರು ಮೇಲು ರುಜುಗೊಳಿಸಿ ರಾಜ್ಯ ಹುಜೂರ್ ಖಜಾನೆಯಿಂದ ಸೆಳೆದು ಪಾವತಿಸಲು ಅನುಮತಿ ನೀಡಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಪಸಂಮೀ/05/ ಆಂಆಸ/2018, ದಿನಾಂಕ: 12-02-2018 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
5/3/18
(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

05/03/18

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
5) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ವ್ಯವಸ್ಥಾಪಕ ನಿರ್ದೇಶಕರು, ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿ., ಐಟಿ ಪಾರ್ಕ್, 1ನೇ ಮಹಡಿ, 4ನೇ ಮುಖ್ಯ ರಸ್ತೆ, ರಾಜಾಜೀನಗರ ಕೈಗಾರಿಕಾ ಪ್ರದೇಶ, ರಾಜಾಜೀನಗರ, ಬೆಂಗಳೂರು-560 020.
7) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
8) ಎಲ್ಲಾ ಮೀನುಗಾರಿಕೆ ಉಪ ನಿರ್ದೇಶಕರಗಳಿಗೆ (ಮೀನುಗಾರಿಕೆ ನಿರ್ದೇಶಕರ ಮುಖಾಂತರ)
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು
10) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
11) ಮಾನ್ಯ ಮೀನುಗಾರಿಕೆ, ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
12) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಂ / ಹೆಚ್ಚಿನ ಪ್ರತಿಗಳು.